ಆ) ಬೀದರ್‌ನಲ್ಲಿ ಗುಲ್ಬರ್ಗಾಕ್ಕಿಂತ ಹೆಚ್ಚಿನ ಹಾಲು ಶೇಖರಣೆಯಾಗುತ್ತಿರುವುದು ನಿಜವೇ?

ಇ) ಹಾಗಿದ್ದಲ್ಲಿ, ಬೀದರ್ ಜಿಲ್ಲೆಗೆ ಪ್ರತ್ಯೇಕ ಹಾಲು ಉತ್ಪಾದನಾ ಮಹಾ ಮಂಡಳಿಯನ್ನು ಸ್ಥಾಪಿಸುವ ಬಗ್ಗೆ ಸರ್ಕಾರ ಪರಿಶೀಲಿಸುತ್ತಿದೆಯೇ.

ಈ) ಇಲ್ಲದಿದ್ದಲ್ಲಿ, ಕಾರಣಗಳೇನು?

ಶ್ರೀ ಬಸವರಾಜ್ ಪಾಟೀಲ್ (ಪಶುಸಗೋಪನೆ ಮತ್ತು ಪಶುವೈದ್ಯ ಸೇವಾ ಸಚಿವರು) :

ಆ) ಗುಲ್ಬರ್ಗಾ ಹಾಲು ಒಕ್ಕೂಟಕ್ಕೆ ಪ್ರಸ್ತುತ ಬೀದರ್ ಜಿಲ್ಲೆಯಿಂದ ದಿನಂಪ್ರತಿ 22,000 ಲೀಟರ್ ಮತ್ತು ಗುಲ್ಬರ್ಗಾ ಜಿಲ್ಲೆಯಿಂದ ದಿನಂಪ್ರತಿ 7,000 ಲೀಟರ್ ಹಾಲು ಸರಬರಾಜಾಗುತ್ತಿದೆ.

ಆ) ಹೌದು

ಇ) ಇಲ್ಲ

ಈ) ಉದ್ಭವಿಸುವುದಿಲ್ಲ.

ನೆಲಮಂಗಲ ತಾಲ್ಲೂಕಿನಲ್ಲಿ ಪರಿಶಿಷ್ಟ ವರ್ಗದವರಿಗಾಗಿ ಸ್ಮಶಾನದ ಜಾಗ

ಶ್ರೀ ಅಂಜನಮೂರ್ತಿ (ನೆಲಮಂಗಲ) : ಮಾನ್ಯ ಕಂದಾಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಆ) ನೆಲಮಂಗಲ ತಾಲ್ಲೂಕಿನ ಬಹುತೇಕ ಗ್ರಾಮಗಳಲ್ಲಿ ಪರಿಶಿಷ್ಟಜಾತಿ:ಪರಿಶಿಷ್ಟವರ್ಗದವರಿಗೆ ಸ್ಮಶಾನದ ಜಾಗ ಇಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಇ) ಹಾಗಿದ್ದಲ್ಲಿ, ಈ ವರ್ಗದವರಿಗೆ ಸ್ಥಳವನ್ನು ಕಾದಿರಿಸಲು ಸರ್ಕಾರ ಏನು ಕ್ರಮ ಕೈಗೊಂಡಿದೆ?

ಶ್ರೀ ಎಂ. ಮಲ್ಲಿಕಾರ್ಜುನ ಖರ್ಗೆ (ಕಂದಾಯ ಸಚಿವರು) :

ಆ) ಇಲ್ಲ.

ಇ) ಯಾವ ಗ್ರಾಮದಲ್ಲಿ ಪರಿಶಿಷ್ಟ ಮತ್ತು ಪರಿಶಿಷ್ಟ ಪಂಗಡದವರಿಗೆ ಸ್ಮಶಾನ ಜಾಗವು ಇಲ್ಲವೋ ಅಂತಹ ಗ್ರಾಮಗಳನ್ನು ಗುರುತಿಸಿ ಸರ್ಕಾರಿ ಜಮೀನನ್ನು ಕಾಯ್ದಿರಿಸಲು ಅಥವಾ ಸರ್ಕಾರಿ ಜಮೀನು ಲಭ್ಯವಿಲ್ಲದ ಪಕ್ಷದಲ್ಲಿ ಭೂ ಸ್ವಾಧೀನಪಡಿಸಿಕೊಂಡು ಕಾಯ್ದಿರಿಸಲು ಕ್ರಮ ಕೈಗೊಳ್ಳಲಾಗುವುದು.

ನೆಲಮಂಗಲ ತಾಲ್ಲೂಕಿನಲ್ಲಿ ಭೂ ಮಾಪನ ಕಾರ್ಯ

2254 - ಶ್ರೀ ಅಂಜನ ಮೂರ್ತಿ (ನೆಲಮಂಗಲ) : ಮಾನ್ಯ ಕಂದಾಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಆ) ನೆಲಮಂಗಲ ತಾಲ್ಲೂಕಿನಲ್ಲಿ ಭೂ ಮಾಪನ (ಲ್ಯಾಂಡ್ ಸರ್ವೆ) ವ್ಯಾಪಕವಾಗಿ ನಡೆದು ಎಷ್ಟು ವರ್ಷಗಳಾಗಿವೆ?

ಇ) ಸರ್ವೆ ದಾಖಲೆಗಳಲ್ಲಿ ಏಕರೂಪತೆ ಹಾಗೂ ಆಧುನೀಕತೇ ತರಲು ಕಂದಾಯ ಇಲಾಖೆ ಕೈಗೊಂಡಿರುವ ಕ್ರಮಗಳೇನು?

ಈ) ಪ್ರತಿ ಗ್ರಾಮದ ಭೂಪಟ ತಯಾರಿಸಲು ಸರ್ಕಾರ ಕ್ರಮ ಕೈಗೊಳ್ಳುವುದೇ?

ಶ್ರೀ ಎಂ. ಮಲ್ಲಿಕಾರ್ಜುನ ಖರ್ಗೆ (ಕಂದಾಯ ಸಚಿವರು) :

ಆ) ಸುಮಾರು 100 ವರ್ಷಗಳಾಗಿವೆ

ಇ) 1) ಭೂಪಟಗಳ ಮುದ್ರಣ